ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 269 ಯುಬಿವಿ 2024

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:22-08-2024.

ಇಂದ,
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ,
ಬೆಂಗಳೂರು

ಇವರಿಗೆ
ಕುಲಸಚಿವರು,
ಬೆಂಗಳೂರು ನಗರ ವಿಶ್ವವಿದ್ಯಾಲಯ,
ಸೆಂಟ್ರಲ್ ಕಾಲೇಜು ಆವರಣ,
ಬೆಂಗಳೂರು.

ಮಾನ್ಯರೆ,

ವಿಷಯ: ಬೆಂಗಳೂರು ನಗರ ವಿಶ್ವವಿದ್ಯಾಲಯದ Reddy Janasangha FGC, Bangalore ಇಲ್ಲಿಗೆ 2024-25ನೇ ಶೈಕ್ಷಣಿಕ ಸಾಲಿಗೆ ಹೊಸ ಕೋರ್ಸು ಮತ್ತು ಶಾಶ್ವತ ಸಂಯೋಜನೆಯನ್ನು ನೀಡುವ ಕುರಿತು.

ಉಲ್ಲೇಖ:-
1. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್‌ಇ 2021, ದಿನಾಂಕ:12.02.2021, ದಿನಾಂಕ: 16.02.2021.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ/384/ಯುಎನ್‌ಇ/ 2020, ದಿನಾಂಕ: 18.02.2022.
3. ತಮ್ಮ ಪತ್ರ ಸಂಖ್ಯೆ: ಬೆಂ.ನ.ವಿ./ಶಾ.ಸಂ.ವಿ./ಹೊ.ಕೋ/ 2024-25 ದಿನಾಂಕ:15.07.2024 (AFF/956/AF/P20GFR0148/2024-25/10831)

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳ ಕಡೆಗೆ ತಮ್ಮ ಗಮನ ಸೆಳೆಯಲಾಗಿದೆ. ಕರ್ನಾಟಕ ರೆಡ್ಡಿ ಜನ ಸಂಘ ವತಿಯಿಂದ ನಡೆಸಲಾಗುತ್ತಿರುವ ರೆಡ್ಡಿ ಜನಸಂಘ ಪ್ರಥಮ ದರ್ಜೆ ಕಾಲೇಜು., ನಂ.1, 16ನೇ ಮುಖ್ಯ ರಸ್ತೆ, 3ನೇ ಬ್ಲಾಕ್, ಕೋರಮಂಗಲ, ಬೆಂಗಳೂರು-560034 ಇಲ್ಲಿ 2024-2025ನೇ *ಸಾಲಿಗೆ ಹೊಸ ಕೋರ್ಸು: MCA (General)-60 ಮತ್ತು ಶಾಶ್ವತ ಸಂಯೋಜನೆ ವಿಸ್ತರಣೆ : B.Com (General)-200, BCA -80, B.Sc. (Physics, Mathematics, Computer Science)-60, B.Sc., (Biochemistry, Biotechology, Genetics)-60 ಕೋರ್ಸುಗಳ ಸಂಯೋಜನೆಗೆ ಅನುಮೋದನೆ ಕೋರಿ* ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(11) ಮತ್ತು 62(1) ರಡಿ ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್ / ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ ಉಲ್ಲೇಖ (3) ರ ತಮ್ಮ ಪತ್ರದ ಮೂಲಕ, UUCMS ಆನ್‌ಲೈನ್ ತಂತ್ರಾಂಶದಲ್ಲಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಸಂವೀಕ್ಷಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ಬೆಂಗಳೂರು ನಗರ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ ಹಾಗೂ ಶೈಕ್ಷಣಿಕ/ಭೌತಿಕ ಹಾಗೂ ನಾಗರೀಕ ಮೂಲಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ನಿಗದಿಪಡಿಸಲಾದ ನಿಯತಾಂಕಗಳ ಹಾಗೂ ಸೂಚ್ಯಾಂಕಗಳ ಪೂರೈಕೆಯನ್ನು ದೃಢಪಡಿಸಿಕೊಂಡು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 384 ಯುಎನ್ಇ 2020, ದಿನಾಂಕ: 18.02.2022ರನ್ವಯ ಅಗತ್ಯ ಪ್ರಮಾಣದ ಜಮೀನಿನ ದಾಖಲಾತಿಗಳನ್ನು ದೃಢಪಡಿಸಿಕೊಂಡು ಪ್ರಸ್ತಾವನೆಯನ್ನು ಪರಿಗಣಿಸಲಾಗಿದೆ.

ಆದುದರಿಂದ, ರೆಡ್ಡಿ ಜನಸಂಘ ಪ್ರಥಮ ದರ್ಜೆ ಕಾಲೇಜು., ನಂ.1, 16ನೇ ಮುಖ್ಯ ರಸ್ತೆ, 3ನೇ ಬ್ಲಾಕ್, ಕೋರಮಂಗಲ, ಬೆಂಗಳೂರು-560034 ಇಲ್ಲಿ *2024-25ನೇ ಸಾಲಿಗೆ ಹೊಸ ಕೋರ್ಸು: MCA (General)-60 ಮತ್ತು ಶಾಶ್ವತ ಸಂಯೋಜನೆ ವಿಸ್ತರಣೆ : B.Com (General)-200, BCA -80, B.Sc. (Physics, Mathematics, Computer Science)-60, B.Sc. (Biochemistry, Biotechology, Genetics)-60 ಕೋರ್ಸುಗಳ ಸಂಯೋಜನೆಗೆ* ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(11) ಮತ್ತು 62 (1) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಿರ್ದೇಶಿತನಾಗಿದ್ದೇನೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000, ಪ್ರಕರಣ 59(11)

i. ಹೊಸ ಕೋರ್ಸು:

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಎಂ.ಸಿ.ಎ. | ಸಾಮಾನ್ಯ | 60 (ಅರವತ್ತು) |

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000, ಪ್ರಕರಣ 62(1)

(ii) ಶಾಶ್ವತ ಸಂಯೋಜನೆ ವಿಸ್ತರಣೆ:

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| B.Com | General | 200 |
| BCA | Bachelor of Computer Application | 80 |
| B.Sc. | Physics, Mathematics, Computer Science | 60 |
| B.Sc. | Biochemistry, Biotechnology, Genetics | 60 |

ಬೆಂಗಳೂರು ನಗರ ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಶೈಕ್ಷಣಿಕ ಪರಿಷತ್ ಮತ್ತು ಸಿಂಡಿಕೇಟ್‌ನ ನಿರ್ಣಯಗಳನ್ನು ಅನುಸರಿಸಿ ಉಲ್ಲೇಖಿತ ಪತ್ರದನ್ವಯ ಸಲ್ಲಿಸಲಾದ ಪ್ರಸ್ತಾವನೆಯನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ರ ಪ್ರಕರಣ 59(11) ಮತ್ತು 62(1) ರ ಉಪಬಂಧಗಳನುಸಾರ ಸಮಗ್ರವಾಗಿ ಸಂವೀಕ್ಷಿಸಿ, ಪರಿಗಣಿಸಲಾಗಿದೆ.

2024-25ನೇ ಸಾಲಿನಿಂದ ರೆಡ್ಡಿ ಜನಸಂಘ ಪ್ರಥಮ ದರ್ಜೆ ಕಾಲೇಜು, ನಂ.1, 16ನೇ ಮುಖ್ಯ ರಸ್ತೆ, 3ನೇ ಬ್ಲಾಕ್, ಕೋರಮಂಗಲ, ಬೆಂಗಳೂರು-560034 ಇಲ್ಲಿ *2024-25ನೇ ಸಾಲಿಗೆ ಹೊಸ ಕೋರ್ಸು:*

*MCA (General)-60 ಮತ್ತು ಶಾಶ್ವತ ಸಂಯೋಜನೆ ವಿಸ್ತರಣೆ: B.Com (General)-200, BCA -80, B.Sc. (Physics, Mathematics, Computer Science)-60, B.Sc. (Biochemistry, Biotechology, Genetics)-60 ಕೋರ್ಸುಗಳನ್ನು ಪ್ರಾರಂಭಿಸಲು ನೀಡಲಾಗಿರುವ ಸರ್ಕಾರದ ಪೂರ್ವೋಕ್ತ ಷರತ್ತುಗಳು ಹಾಗೂ ಸ್ಥಳೀಯ ವಿಚಾರಣೆ ಸಮಿತಿಯ ಹಾಗೂ ಕೆಳಕಂಡ ಷರತ್ತುಗಳ ಪಾಲನೆಗೆ ಒಳಪಟ್ಟಿರುತ್ತದೆ:-*

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;
2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
6. ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;
7. ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offense) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;
8. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;
9. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
10. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;
11. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
12. ಶೈಕ್ಷಣಿ/ಭೌತಿಕ ಹಾಗೂ ನಾಗರೀಕ ಮೂಲ ಸೌಕರ್ಯಗಳ ಲಭ್ಯತೆ ಹಾಗೂ ಗುಣ ಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ನಿಗದಿ ಪಡಿಸಲಾದ ಸೂಚ್ಯಾಂಕಗಳ ಪೈಕಿ ಪಾಲನೆಯಾಗದ ಸೂಚ್ಯಾಂಕಗಳನ್ನು 6 ತಿಂಗಳ ಒಳಗಾಗಿ ಪೂರೈಸತಕ್ಕದ್ದು.

13. ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ಪ್ರಕರಣ 59 ಮತ್ತು 62ರಲ್ಲಿನ ಮಾನದಂಡಗಳು ಹಾಗೂ ಶಾಶ್ವತ ಸಂಯೋಜನೆ ವಿಸ್ತರಣೆಗೆ ಸಂಬಂಧಿಸಿದಂತೆ, ಸರ್ಕಾರದಿಂದ ಹೊರಡಿಸಿರುವ ಆದೇಶ ಮತ್ತು ಸುತ್ತೋಲೆಗಳನ್ನು ಸಂಬಂಧಿಸಿದ ಕಾಲೇಜು/ಸಂಸ್ಥೆಗಳು ಪಾಲಿಸಿವೆಯೇ ಎಂಬುದರ ಕುರಿತಾಗಿ ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು. ತಪ್ಪಿದಲ್ಲಿ ವಿಶ್ವವಿದ್ಯಾಲಯವು ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್‌ಇ 2021, ದಿನಾಂಕ: 12.02.2021 ರಲ್ಲಿನ ಷರತ್ತುಗಳನ್ನು (01) ಒಂದು ವರ್ಷದೊಳಗೆ ಪೂರೈಸುವ ಷರತ್ತಿಗೊಳಪಟ್ಟಿದೆ.

ತಮ್ಮ ನಂಬುಗೆಯ,

ಕೆ. ಮಂಜುನಾಥ 21/8/24

(ಕೆ.ಮಂಜುನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2).

22/8

ಪ್ರತಿ:

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು-560 001.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಪ್ರಾಂಶುಪಾಲರು, ರೆಡ್ಡಿ ಜನಸಂಘ ಪ್ರಥಮ ದರ್ಜೆ ಕಾಲೇಜು, ನಂ.1, 16ನೇ ಮುಖ್ಯ ರಸ್ತೆ, 3ನೇ ಬ್ಲಾಕ್, ಕೋರಮಂಗಲ, ಬೆಂಗಳೂರು-560034.
6. ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ ಇವರಿಗೆ (ಉನ್ನತ ಶಿಕ್ಷಣ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಲು)